78

# ಉಪತಹಶೀಲ್ದಾರವರ ನ್ಯಾಯಾಲಯ ನಾಡ ಕಛೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾ.ಕ.ಹೊ/59/2015-16 ದಿನಾಂಕ:05-04-2016

| ಅರ್ಜಿದಾರರು | ತಕರಾರುದಾರರು |
| --- | --- |
| 1)ಈರಮ್ಮ ಗಂಡ ಶಿರಿಯಪ್ಪ<br>ಪಿಚ್ಚಾರಹಟ್ಟಿ ಗೊಲ್ಲರಹಟ್ಟಿ ಗ್ರಾಮ<br>2)ಭರಮಪ್ಪ ತಂದೆ ನಿಂಗಪ್ಪ<br>ಕೆಂಚಮಲ್ಲನಹಳ್ಳಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಹೊಸಹಳ್ಳಿ |
| ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 179ಇಪೈಕಿ. ವಿಸ್ತೀರ್ಣ 1-10 ಎಕ್ರೆ ಜಮೀನನ್ನು ಕ್ರಯ ಪತ್ರ ಪ್ರಕಾರ ಹಕ್ಕು ಬದಲಾವಣೆ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 179ಇಪೈಕಿ. ವಿಸ್ತೀರ್ಣ 1-10 ಎಕ್ರೆ ಜಮೀನನ್ನು ಸದರಿ ಗ್ರಾಮದ ಭರಮಪ್ಪ ತಂದೆ ನಿಂಗಪ್ಪ ಇವರಿಂದ ಸದರಿ ತಾಲೂಕು ಪಿಚ್ಚಾರಹಟ್ಟಿ ಗೊಲ್ಲರಹಟ್ಟಿ ಗ್ರಾಮದ ಈರಮ್ಮ ಗಂಡ ಶಿರಿಯಪ್ಪ ಇವರು ದಿನಾಂಕ 23-01-2015 ರ ಡಾಕ್ಯುಮೆಂಟ್ ನಂಬರ್: 3685/2014-15 ರ ಪ್ರಕಾರ ಖರೀದಿಸಿ ಕೂಡ್ಲಿಗಿಯ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿ ಮಾಡಿಸಿ ಕೊಂಡಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಕೆಂಚಮಲ್ಲನಹಳ್ಳಿ ಇವರು ನಮೂನೆ-21 ರ ನೋಟಿಸನ್ನು ದಿನಾಂಕ: 22-05-2015 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಅರ್ಜಿದಾರರು ಭೂ ಹಿಡುವಳಿ ದೃಡಿಕರಣ ಪತ್ರ ಕೃಷಿ ಕುಟುಂಬ ದೃಡಿಕರಣ ಪತ್ರ ಲಗತ್ತಿಸಿಲ್ಲದ ಕಾರಣ ಹಾಗೂ ಅವರ ವೃತ್ತಿ ಮತ್ತು ಆದಾಯದ ಬಗ್ಗೆ ಮಾಹಿತಿ ನೀಡಿಲ್ಲದ ಕಾರಣ ಈ ಪ್ರಕರಣದ ಎಂ.ಆರ್.ನಂ: 53/2014-15. ದಿನಾಂಕ: 22-06-2015 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದೆಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸು ನೀಡಿ ದಿನಾಂಕ 15-09-2015 ರಿಂದ 05-04-2016. ರ ವರೆಗೆ ವಿಚಾರಣೆ ಮಾಡಲಾಯಿತು

ವಿಚಾರಣೆಯ ಸಮಯದಲ್ಲಿ ಒಂದನೇ ಅರ್ಜಿದಾರರು ಗೈರು ಹಾಜರಾಗಿರುತ್ತಾರೆ. ಎರಡನೇ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 179ಇಪೈಕಿ. ವಿಸ್ತೀರ್ಣ 1-10 ಎಕ್ರೆ ಜಮೀನನ್ನು ಸದರಿ ತಾಲೂಕು ಪಿಚ್ಚಾರಹಟ್ಟಿ ಗೊಲ್ಲರಹಟ್ಟಿ ಗ್ರಾಮದ ಈರಮ್ಮ ಗಂಡ ಶಿರಿಯಪ್ಪ ಇವರಿಗೆ ದಿನಾಂಕ 23-01-2015 ರ ಡಾಕ್ಯುಮೆಂಟ್ ನಂಬರ್: 3685/2014-15 ರ ಪ್ರಕಾರ ರೂ: 48.000/- ಗಳಿಗೆ ಖಂಡಿತ ಕ್ರಯಕ್ಕೆ ಕೊಟ್ಟು ಕೂಡ್ಲಿಗಿಯ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿ ಮಾಡಿಸಿ ಕೊಟ್ಟಿರುತ್ತೇನೆ. ಕಾರಣ ಸದರಿ ಕ್ರಯ ಪತ್ರ ಪ್ರಕಾರ ಕ್ರಯದಾರರಾದ ಈರಮ್ಮ ಗಂಡ ಶಿರಿಯಪ್ಪ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ನೊಂದಾಯಿತ ಕ್ರಯ ಪತ್ರದನ್ವಯ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

**-:ಆದೇಶ:-**

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಸ ಮತ್ತು ಕಾರಣಗಳಿಂದ **ಕೂಡ್ಲಿಗಿ ತಾಲೂಕು** ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 179ಇಪೈಕಿ. ವಿಸ್ತೀರ್ಣ 1-10 ಎಕ್ರೆ ಜಮೀನನ್ನು ದಿನಾಂಕ 23-01-2015 ರ ಡಾಕ್ಯುಮೆಂಟ್ ನಂಬರ್: 3685/2014-15 ರ ಕ್ರಯ ದಸ್ತಾವೇಜು ಪ್ರಕಾರ ಅರ್ಜಿದಾರರಾದ ಹಾಗೂ ಕ್ರಯದಾರರಾದ ಈರಮ್ಮ ಗಂಡ ಶಿರಿಯಪ್ಪ ಪಿಚ್ಚಾರಹಟ್ಟಿ ಗೊಲ್ಲರಹಟ್ಟಿ ಗ್ರಾಮ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ: 05-04-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಹೊಸಹಳ್ಳಿ
ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಈರಮ್ಮ ಗಂಡ ಶಿರಿಯಪ್ಪ, ಪಿಚ್ಚಾರಹಟ್ಟಿ ಗೊಲ್ಲರಹಟ್ಟಿ ಗ್ರಾಮ ಭರಮಪ್ಪ ತಂದೆ ನಿಂಗಪ್ಪ ಕೆಂಚಮಲ್ಲನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಹೊಸಹಳ್ಳಿ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕೆ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತತದೆ.